**ಸಾಕ್ಷಿಯನ್ನು ದಿನಾಂಕ 21.08.2023 ರಂದು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಹೆಚ್ ಎನ್ ಡಿ ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದಕ್ಕೆ ನಾನೇ ಸಹಿ ಮಾಡಿರುತ್ತೇನೆ.

ಪ್ರತಿವಾದಿ ನನಗೆ ಬರೆದುಕೊಟ್ಟ ಕ್ರಯದ ಕರಾರು ಪತ್ರ ಹಾಜರುಪಡಿಸಿದ್ದು ಅದನ್ನು ನಿ.ಪಿ.1 ಎಂದು, ಪ್ರತಿವಾದಿಯ ಸಹಿ ನೋಡಿ ಗುರುತಿಸಿದ್ದು ಅದನ್ನು ನಿ.ಪಿ.1(ಎ) ಎಂದು, ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿ.ಪಿ.1(ಬಿ) ಎಂದು, ಸಾಕ್ಷಿದಾರರು ಎಂದು ವಿರೇಂದ್ರ ಸಿ ಪಟ್ಟಣಶೆಟ್ಟಿ ಮತ್ತು ರವೀಚಂದ್ರ ಎ ಬಿನ್ನಾಳ ಇವರು ಸಹಿ ಮಾಡಿರುತ್ತಾರೆ ಎಂದು  ಸದರಿಯವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿ.ಪಿ.1(ಸಿ) ಮತ್ತು (ಡಿ) ಎಂದು ಗುರುತಿಸಲಾಯಿತು. ದಾವಾಸ್ತಿಗೆ ಸಂಬಂಧಿಸಿದಂತೆ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿ.ಪಿ.2 ಎಂದು, ವಕೀಲರ ಮೂಲಕ ಪ್ರತಿವಾದಿಗೆ ಕಳುಹಿಸಿದ ನೊಟೀಸಿನ ಕಛೇರಿ ಪ್ರತಿ  ಹಾಜರುಪಡಿಸಿದ್ದು ಅದನ್ನು ನಿ.ಪಿ.3 ಎಂದು, ಪ್ರತಿವಾದಿಗೆ ವಕೀಲರ ಮೂಲಕ ನೊಟೀಸ್ ಕಳುಹಿಸಿದ ಬಗ್ಗೆ ಅಂಚೆ ರಶೀದಿ ಹಾಜರುಪಡಿಸಿದ್ದು ಅದನ್ನು ನಿ.ಪಿ.4 ಎಂದು, ವಕೀಲರ ಮೂಲಕ ಪ್ರತಿವಾದಿಗೆ ಕಳುಹಿಸಿದ ನೊಟೀಸಿನ ಲಕೋಟೆ ವಾಪಸ್ ಬಂದಿದ್ದು ಅದನ್ನು ನಿ.ಪಿ.5 ಎಂದು, ಸದರಿ ನಿ.ಪಿ.5 ಅನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಗಿ ಅದರಲ್ಲಿನ ನೊಟೀಸಿನ ಪ್ರತಿಯನ್ನು ನಿ.ಪಿ.5(ಎ) ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಅದೆ.

**2 ನೇ ಹೆ ಹಿ ದಿ ನ್ಯಾ ಮತ್ತು ಜೆಎಂಎಫಸಿ,**

**ಧಾರವಾಡ.**